**ಕರ್ನಾಟಕ ಸರ್ಕಾರ**
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
**ರಾಷ್ಟ್ರೀಯ ಸೇವಾ ಯೋಜನೆ**

**ಸಂಖ್ಯೆ:** ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2022-23

ಆಯುಕ್ತರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01
ದಿನಾಂಕ: 12.08.2022

## ಸುತ್ತೋಲೆ

ವಿಷಯ: ದೇಶದ 75 ನೇ ವರ್ಷದ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ ಸಂಭ್ರಮವನ್ನು **''ಹರ್ ಘರ್ ತಿರಂಗ''** ಎಂಬ ವಿಶೇಷ ಅಭಿಯಾನದ ಮೂಲಕ ಆಚರಿಸುವ ಬಗ್ಗೆ.

ಉಲ್ಲೇಖ: 1)ಇಲಾಖೆಯ ಪತ್ರ ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2022-23 ದಿನಾಂಕ:05.07.2022
2) ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ) ಉನ್ನತ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಇಡಿ 70 ವಿವಿಧ 2022 ದಿನಾಂಕ: 10.08.2022

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, 75 ನೇ ವರ್ಷದ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ ಸಂಭ್ರಮವನ್ನು, **''ಹರ್ ಘರ್ ತಿರಂಗ''** ಎಂಬ ವಿಶೇಷ ಅಭಿಯಾನದ ಮೂಲಕ ಆಚರಿಸಲು ಮಾನ್ಯ ಮುಖ್ಯಮಂತ್ರಿಯವರ ಕರೆಯಂತೆ ರಾಜ್ಯದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಭೋಧಕ/ಬೋಧಕೇತರ /ಅಧಿಕಾರಿ/ಸಿಬ್ಬಂದಿವರ್ಗದವರು 2022 ರ ಆಗಸ್ಟ್ 13 ರಿಂದ 15 ರ ವರೆಗೆ ತಮ್ಮ ತಮ್ಮ ಮನೆಗಳ ಮೇಲೆ ರಾಷ್ಟ್ರದ ತ್ರಿವರ್ಣ ಧ್ವಜವನ್ನು ಹಾರಿಸುವ ಮೂಲಕ **''ಹರ್ ಘರ್ ತಿರಂಗ''** ಎಂಬ ಈ ವಿಶೇಷ ಅಭಿಯಾನವನ್ನು ಯಶಸ್ವಿಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಈ ಸಂಬಂಧ ಇಲಾಖಾ ವ್ಯಾಪ್ತಿಯ ಎಲ್ಲಾ ತಾಂತ್ರಿಕ ಶಿಕ್ಷಣ ಕಟ್ಟಡಗಳಲ್ಲಿ ದಿನಾಂಕ: 13.08.2022 ರಿಂದ 15.08.2022 ರ ವರೆಗೆ ಧ್ವಜ ಸಂಹಿತೆಯಂತೆ ಧ್ವಜಹಾರಿಸಲು ಕ್ರಮವಹಿಸುವುದು. ಮುಂದುವರೆದು ಆಗಸ್ಟ್ 15 ರಂದು ಇಲಾಖಾ ವ್ಯಾಪ್ತಿಯ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಅಧ್ಯಾಪಕರುಗಳು ಮತ್ತು ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವನ್ನು ವಿಜ್ರಂಭಣೆಯಿಂದ ಆಚರಿಸುವಂತೆ ಹಾಗೂ ಧ್ವಜ ಸಂಹಿತೆಯಂತೆ ಧ್ವಜ ಹಾರಿಸುವುದು ಯಾವುದೇ ಉಲ್ಲಂಘನೆಯಾಗದಂತೆ ಕ್ರಮ ವಹಿಸಲು ಸೂಚಿಸಿದೆ.

12/08/2022

**ನಿರ್ದೇಶಕರು**

ಇವರಿಗೆ :-
ಇಲಾಖೆಯ ವ್ಯಾಪ್ತಿಗೊಳಪಡುವ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರುಗಳ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ,

ಪ್ರತಿ:-
1. ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ) ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2&ಸಾಮಾನ್ಯ-2) ಬೆಂಗಳೂರು -ಇವರ ಮಾಹಿತಿಗಾಗಿ
2. ಇ ಆಡಳಿತ-ಅಂತರ್ ಜಾಲ ತಾಣದಲ್ಲಿ ಪ್ರಕಟಿಸಲು
3. ಕಛೇರಿ ಕಡತಕ್ಕೆ